ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ 2013-14ರಲ್ಲಿನ ಅಧ್ಯಾಪಕರ ನೇಮಕಾತಿ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

130 (134) ಮಾನ್ಯ ಉಪ ಮುಖ್ಯಮಂತ್ರಿ ಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ 2013-14ನೇ ಸಾಲಿನಲ್ಲಿ ಎಷ್ಟು ಜನ ಅಧ್ಯಾಪಕರನ್ನು ನೇಮಕಾತಿ ಮಾಡಲಾಗಿದೆ; (ವಿವರ ನೀಡುವುದು)

(ಆ) ಈ ನೇಮಕಾತಿಯಲ್ಲಿ ಮುದ್ದೇನಹಳ್ಳಿ ಸ್ನಾತಕೋತ್ತರ ಕೇಂದ್ರದ ಎಂ.ಬಿ.ಎ. ವಿಭಾಗಕ್ಕೆ ಸಹ-ಪ್ರಾಧ್ಯಾಪಕರಾಗಿ ನೇಮಕಾತಿಗೊಂಡು ನಂತರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಪ್ರಾದೇಶಿಕ ಕಛೇರಿ, ಬೆಂಗಳೂರು ಇಲ್ಲಿಗೆ ಎರವಲು ಸೇವೆಯಲ್ಲಿ ಪ್ರಭಾರ ಪ್ರಾದೇಶಿಕ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವವರು ಯಾರು; (ವಿವರ ನೀಡುವುದು)

(ಇ) ಅವರು ನೇಮಕಗೊಂಡ ಸಂದರ್ಭದಲ್ಲಿ ಅವರು ನೀಡಿದ ಅನುಭವ ಪತ್ರ ಹಾಗೂ ಪದವಿ ಪತ್ರಗಳ ಪ್ರತಿಗಳನ್ನು ನೀಡುವುದು ?